## ಮಾನ್ಯ ವಿಧಾನ ಪರಿಷತ್ತಿನ ಸದಸ್ಯರಾದ ಶ್ರೀ ಕಿಶೋರ್ ಕುಮಾರ್ ಪುತ್ತೂರು ಇವರು ನಿಯಮ 72ರಡಿ ನೀಡಿರುವ ಸೂಚನೆಗೆ ಮಾಹಿತಿ

**ಸೂಚನೆ:-**

ದಕ್ಷಿಣ ಕನ್ನಡ ಮತ್ತು ಉಡುಪಿ ಜಿಲ್ಲೆಗಳಲ್ಲಿ ಕೃಷಿಕರು ಅಕ್ರಮ ಸಕ್ರಮದಡಿ ಭೂ ಮಂಜೂರಾತಿ ಕೋರಿ ನಮೂನೆ 50, 53 ಮತ್ತು 57 ರಡಿ ಅರ್ಜಿ ಸಲ್ಲಿಸಿದ್ದು, ಒಂದೇ ಸರ್ವೆ ನಂಬರ್‌ಗಳಲ್ಲಿ ಕಂದಾಯ ಮತ್ತು ಅರಣ್ಯ ಇಲಾಖೆಯ ಜಮೀನುಗಳು ಬೆರೆತುಕೊಂಡಿರುವುದರಿಂದ ಸದರಿ ಜಮೀನುಗಳ ಗಡಿ ಗುರುತಿಸದ ಕಾರಣ ಕೃಷಿಕರಿಗೆ ಜಮೀನು ಮಂಜೂರು ಮಾಡಲು ಸಾಧ್ಯವಾಗುತ್ತಿಲ್ಲ. ಮತ್ತು ಗ್ರಾಮೀಣ ಭಾಗದಲ್ಲಿ ಪೋಡಿ ಕೋರಿ ಸಲ್ಲಿಕೆಯಾಗಿರುವ ಅರ್ಜಿಗಳು ಕಾಲಮಿತಿಯೊಳಗೆ ವಿಲೇವಾರಿಯಾಗದೆ ರೈತರಿಗೆ ತುಂಬಾ ತೊಂದರೆಯಾಗಿದೆ. ಆದ್ದರಿಂದ, ಅಕ್ರಮ ಸಕ್ರಮ ಯೋಜನೆಯಡಿ ಭೂ ಮಂಜೂರಾತಿ ಕೋರಿ ಸಲ್ಲಿಕೆಯಾಗಿರುವ ಅರ್ಜಿಗಳಿಗೆ ಶೀಘ್ರವಾಗಿ ಭೂ ಮಂಜೂರು ಮಾಡಲು ಅನುಕೂಲವಾಗುವಂತೆ ಕಂದಾಯ ಮತ್ತು ಅರಣ್ಯ ಇಲಾಖೆಗಳ ಜಂಟಿ ಸರ್ವೆ ನಡೆಸಿ, ಗಡಿ ಗುರುತಿಸಬೇಕು ಮತ್ತು ಪೋಡಿಗಾಗಿ ಬಾಕಿ ಇರುವ ಅರ್ಜಿಗಳನ್ನು ತುರ್ತಾಗಿ ವಿಲೇವಾರಿ ಮಾಡುಲು ಕ್ರಮ ಕೈಗೊಳ್ಳುವ ಬಗ್ಗೆ.

**ಉತ್ತರ:-**

ದಕ್ಷಿಣ ಕನ್ನಡ ಮತ್ತು ಉಡುಪಿ ಜಿಲ್ಲೆಗಳಲ್ಲಿ ಹೆಚ್ಚಿನ ಎಲ್ಲಾ Reserved/Notified ಅರಣ್ಯಗಳ ಬಗ್ಗೆ RTC ಇಂಡೀಕರಣ ಮಾಡಲಾಗಿದೆ ಹಾಗೂ ಹೆಚ್ಚಿನ ಎಲ್ಲಾ ಇಂತಹ ಅರಣ್ಯ ಇಲಾಖೆಯಿಂದ ಗುರುತಿಸಿಕೊಂಡಿರುವುದಾಗಿದೆ. ಇಂತಹ ಪ್ರಕರಣಗಳಲ್ಲಿ ಮಂಜೂರಾತಿ ಕೋರಿರುವ ಅರ್ಜಿಗಳ ಬಾಬ್ತು ಅರಣ್ಯ ಇಲಾಖೆಯ ಸಿಬ್ಬಂದಿಯೊಂದಿಗೆ ಜಂಟಿಯಾಗಿ ಸ್ಥಳಪರಿಶೀಲನೆ ಮಾಡಿ ಗಡಿ ಗುರುತಿಸಿ ಮಂಜೂರಾತಿ ಬಗ್ಗೆ ಮಂಡಿಸಲಾಗುತ್ತಿದೆ. ಈ ಬಗ್ಗೆ ಯಾವುದೇ ತೊಂದರೆ ಉಂಟಾಗಿರುವುದಿಲ್ಲ.

ದಕ್ಷಿಣ ಕನ್ನಡ ಜಿಲ್ಲೆಯಲ್ಲಿ ಮಂಜೂರಾತಿ ಕೋರಿ ಸಲ್ಲಿಕೆಯಾದ ಅರ್ಜಿಗಳ ಪೈಕಿ 205 ಅರ್ಜಿಗಳ ಅಳತೆ ಕಾರ್ಯನಿರ್ವಹಿಸಲಾಗಿದೆ. ಹಾಗೆಯೇ, ಉಡುಪಿ ಜಿಲ್ಲೆಯಲ್ಲಿ 27,282 ಎಕರೆ Deemed Forest ಜಮೀನು ಇರುತ್ತದೆ. ಈ ಪೈಕಿ ಭಾಗಶಃ ಅರಣ್ಯ ಹಾಗೂ ಭಾಗಶಃ ಕಂದಾಯ ಇರುವ ಜಮೀನುಗಳಲ್ಲಿ ಭೂ ಮಂಜೂರಾತಿಗೆ ಕ್ರಮವಹಿಸಿದ್ದು, ಉಡುಪಿ ಜಿಲ್ಲೆಯಲ್ಲಿ ಮಂಜೂರಾತಿ ಕೋರಿ ಸಲ್ಲಿಕೆಯಾದ ನಮೂನೆ 50, 53, 57ರ ಅರ್ಜಿಗಳಲ್ಲಿ ಈಗಾಗಲೇ ಒಂದು ಹಂತದ ಪರಿಶೀಲನೆ ಮುಕ್ತಾಯಗೊಂಡಿದ್ದು, ಸ್ವೀಕೃತವಾದ ಅರ್ಜಿಗಳ ಪೈಕಿ 1048 ಅರ್ಜಿಗಳು ಮಾತ್ರ ಮಂಜೂರಾತಿಗೆ ಅರ್ಹವಿರುತ್ತವೆ. ಮಂಜೂರಾತಿಗೆ ಅರ್ಹವಿರುವ ಅರ್ಜಿಗಳ ಪೈಕಿ ಈಗಾಗಲೇ 337 ಅರ್ಜಿಗಳಿಗೆ ಸಂಬಂಧಿಸಿದಂತೆ ಅಳತೆ ಕಾರ್ಯನಿರ್ವಹಿಸಲಾಗಿದೆ.

ದಕ್ಷಿಣ ಕನ್ನಡ ಜಿಲ್ಲೆಯಲ್ಲಿ ಈಗಾಗಲೇ ಮಂಜೂರಿಯಾಗಿರುವ ಜಮೀನುಗಳ ಪೋಡಿ ಕ್ರಮ ಜರುಗಿಸುವಾಗ ಕಂದಾಯ ಹಾಗೂ ಅರಣ್ಯ ಜಮೀನಿಗಳ ಗಡಿಗಳನ್ನು ಪ್ರತ್ಯೇಕವಾಗಿ ವಿಭಜಿಸುವ ಪ್ರಕ್ರಿಯೆ ನಿರ್ವಹಿಸದೇ ನೇರವಾಗಿ ಪೋಡಿ ಕ್ರಮ ಜರುಗಿಸಲಾಗುತ್ತಿದೆ. ಈಗಾಗಲೇ ಸರ್ಕಾರದಿಂದ ಬಗರ್ ಹುಕುಂ

ತಂತ್ರಾಂಶ ಮಾಡಿದ್ದು, ಸದರಿ ತಂತ್ರಾಂಶದಲ್ಲಿ ಕಂದಾಯ ಹಾಗೂ ಅರಣ್ಯ ಇಲಾಖೆಗೆ ಪ್ರತ್ಯೇಕ ಲಾಗಿನ್ ನೀಡುವ ಬಗ್ಗೆ ಕ್ರಮ ಕೈಗೊಳ್ಳಲಾಗುತ್ತಿದೆ.

ಉಡುಪಿ ಜಿಲ್ಲೆಯಲ್ಲಿ ಈಗಾಗಲೇ ಮಂಜೂರಿಯಾಗಿರುವ ಜಮೀನುಗಳ ಪೋಡಿ ಕ್ರಮ ಜರುಗಿಸುವಾಗ Deemed Forest ಬಾಬ್ತು ಕಂದಾಯ ಹಾಗೂ ಅರಣ್ಯ ಜಮೀನುಗಳ ಗಡಿಗಳನ್ನು ಪ್ರತ್ಯೇಕವಾಗಿ ವಿಭಜಿಸುವ ಪ್ರಕ್ರಿಯೆ ನಿರ್ವಹಿಸದೆ ನೇರವಾಗಿ ಜಿಲ್ಲೆಯಲ್ಲಿ ಪೋಡಿ ಕ್ರಮ ಜರುಗಿಸಲಾಗುತ್ತಿದೆ.

ದಕ್ಷಿಣ ಕನ್ನಡ ಜಿಲ್ಲೆಯಲ್ಲಿ ಭಾಗಶಃ ಅರಣ್ಯ ಇರುವ ಸರ್ವೇ ನಂಬರುಗಳ ಬಾಬ್ತು ಪ್ರತಿ ತಾಲ್ಲೂಕಿನಲ್ಲಿ ಪ್ರತಿ ವಾರ ಜಂಟಿ ಅಳತೆ ನಿರ್ವಹಿಸುತ್ತಿದ್ದು, ಮುಂದಿನ 6 ತಿಂಗಳ ಅವಧಿಯಲ್ಲಿ ಗಡಿ ಗುರುತಿಸಿ ಅಂತಿಮಗೊಳಿಸಲಾಗುವುದು.

ಉಡುಪಿ ಜಿಲ್ಲೆಯಲ್ಲಿ ಕಂದಾಯ-ಅರಣ್ಯ ಜಮೀನಿನ ಸರ್ವೆ ಕಾರ್ಯಗಳನ್ನು ಜಂಟಿಯಾಗಿ ನಡೆಸುವ ಸಲುವಾಗಿ ಪ್ರತಿ ಮಂಗಳವಾರದಂದು ಆಯಾ ತಾಲೂಕು ತಹಶೀಲ್ದಾರರು ಕಂದಾಯ ಇಲಾಖೆ/ಮೋಜಣಿ ಇಲಾಖೆ/ಅರಣ್ಯ ಇಲಾಖೆಗಳ ಅಧಿಕಾರಿಗಳೊಂದಿಗೆ ಜಂಟಿಯಾಗಿ ಸಭೆಯನ್ನು ನಡೆಸಿ Table Top Work ನಡೆಸಿ ಸರ್ವೆ ಕಾರ್ಯಕ್ಕೆ ಬೇಕಾಗುವ ದಾಖಲೆಗಳನ್ನು ಸಂಗ್ರಹಿಸಿ, ಪ್ರತಿ ಗುರುವಾರದಂದು ಜಂಟಿಯಾಗಿ ಕಂದಾಯ/ಅರಣ್ಯ/ಮೋಜಣಿ ಇಲಾಖೆಯವರು ಸ್ಥಳಕ್ಕೆ ಭೇಟಿ ನೀಡಿ ಸರ್ವೆ ಕಾರ್ಯನಡೆಸಿ ನಕ್ಷೆಯನ್ನು ತಯಾರಿಸುವ ಕಾರ್ಯವನ್ನು ನಡೆಸುವಂತೆ ತಹಶೀಲ್ದಾರರಿಗೆ ನಿರ್ದೇಶನ ನೀಡಲಾಗಿದೆ.

**(ಕಡತ ಸಂಖ್ಯೆ: ಆರ್‌ಡಿ 22 ಎಲ್‌ಜಿಎ 2025)**

**(ಕೃಷ್ಣ ಬೈರೇಗೌಡ)**
ಕಂದಾಯ ಸಚಿವರು